ವಿ330-(6)

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ರವರು ನಿಯಮ 330 ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ

*ವಿಷಯ:-* "ಅನುದಾನ ರಹಿತ ಶಾಲಾ ಕಾಲೇಜುಗಳು, ಪಾಲಿಟೆಕ್ನಿಕ್, ಐ,ಟಿ.ಐ, ಬಿ.ಇ.ಡಿ. ಡಿ.ಇ.ಡಿ, ಮತ್ತು ಇತರೆ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ಕೋವಿಡ್-19 ಹಿನ್ನೆಲೆಯಲ್ಲಿ ಆರ್ಥಿಕ ಮುಗ್ಗಟ್ಟಿನಿಂದಾಗಿ ಕಳೆದ ಫೆಬ್ರವರಿ-2020 ರಿಂದ ವೇತನ ನೀಡದಿರುವ ಬಗ್ಗೆ ಹಾಗೂ ಆಡಳಿತ ಮಂಡಳಿಗಳ ಆರ್ಥಿಕ ತೊಂದರೆಯಿಂದಾಗಿ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ."

*ಉತ್ತರ:-* ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿದ್ದರೂ ಸಹ ಮಾರ್ಚ್-2020 ರಿಂದ ಇಲ್ಲಿಯವರೆಗೆ ಶಾಲಾ, ಕಾಲೇಜುಗಳು ನಡೆಯದಿದ್ದರು ರಾಜ್ಯದ ಸರ್ಕಾರಿ, ಅನುದಾನಿತ ಶಾಲಾ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ರಾಜ್ಯ ಸರ್ಕಾರವು ವೇತನಾನುದಾನವನ್ನು ಬಿಡುಗಡೆ ಮಾಡುತ್ತಿದೆ. ಇದಲ್ಲದೇ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಿಗೆ ಐದು ತಿಂಗಳ ಗೌರವ ಧನವನ್ನು ಸಹ ಬಿಡುಗಡೆ ಮಾಡಲಾಗಿದೆ. ಸರ್ಕಾರಿ ಮತ್ತು ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳಿಗೆ ವೇತನ ಪಾವತಿಸುವುದು ಸರ್ಕಾರದ ಆದ್ಯತೆ ಆಗಿರುತ್ತದೆ. ಅನುದಾನ ರಹಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳಿಗೆ ವೇತನ ಬಿಡುಗಡೆ ಮಾಡುವುದು ಸಂಬಂಧ ಪಟ್ಟ ಆಡಳಿತ ಮಂಡಳಿಗಳ ಕರ್ತವ್ಯವಾಗಿದೆ. ಸದ್ಯದ ಆರ್ಥಿಕ ಪರಿಸ್ಥಿತಿಯಲ್ಲಿ ಸರ್ಕಾರದಿಂದ ಯಾವುದೇ ವೆಚ್ಚ ಭರಿಸಲು ಸಾಧ್ಯವಿರುವುದಿಲ್ಲ.

ಸಂಖ್ಯೆ:ಆಇ 242 ವೆಚ್ಚ-8/2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯ ಮಂತ್ರಿ